		ಅನ್ವಯಿಸಿ ಉತ್ಪಾದಕರಿಗೆ ನೀಡಲು ಸಾಧ್ಯವಾಗುವುದಿಲ್ಲ. ಸಂಬಂಧಪಟ್ಟ ಜಿಲ್ಲಾ ಹಾಲು ಒಕ್ಕೂಟಗಳು ಈ ಕೆನೆಭರಿತ ಹಾಲಿನಿಂದ ಬರುವ ಲಾಭವನ್ನು ತಮ್ಮ ಆರ್ಥಿಕ ಸ್ಥಿತಿಗತಿಗನುಗುಣವಾಗಿ ಉತ್ಪಾದಕರಿಗೆ ನೀಡುತ್ತವೆ.
ಊ)	ಏರಿಸಿರುವ ದರವನ್ನು ಕಡಿಮೆಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?	– ಇಲ್ಲ–

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: ೧೭೦೬ (೨೨೩೨)

ಸದಸ್ಯರ ಹೆಸರು : ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲ)

ಉತ್ತರಿಸುವ ಸಚಿವರು : ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು)

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬಾಗೇಪಲ್ಲಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಸ್ವಂತ ಕಟ್ಟಡವಿಲ್ಲದೆ ಅಲ್ಲಿನ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ	ಹೌದು
ಆ)	ಈ ತರಬೇತಿ ಸಂಸ್ಥೆಗೆ ಕಟ್ಟಡ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?	ಹೌದು
ಇ)	ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು?	ನಿವೇಶನದ ಸುತ್ತಲೂ ಕಾಂಪೌಂಡ್ ನಿರ್ಮಿಸಲಾಗಿದೆ. ಕಟ್ಟಡ ನಿರ್ಮಾಣವು ಆಯವ್ಯಯ ಅನುದಾನದ ಲಭ್ಯತೆಯ ಮೇಲೆ ಆಧರಿಸಿರುತ್ತದೆ.